## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನಲ್ಲಿ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾಗಿರುವ / ಹಾನಿಯಾಗುವ ಮನೆಗಳಿಗೆ ಪರಿಹಾರವನ್ನು ಪಾವತಿಸುವ ಮತ್ತು ಈ ಅವಧಿಯ ಮನೆ ಹಾನಿ ಪ್ರಕರಣಗಳ ವಿವರಗಳನ್ನು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ.

**ಓದಲಾದ:**
1. ಸರ್ಕಾರದ ಆದೇಶ ಸಂಖ್ಯೆ: ಕಂಇ 258 ಟಿಎನ್‌ಆರ್ 2024, ದಿನಾಂಕ: 01.08.2024.
2. ಸರ್ಕಾರದ ಪರಿಷ್ಕೃತ ಸೇರ್ಪಡೆ ಆದೇಶ ಸಂಖ್ಯೆ: ಕಂಇ 258 ಟಿಎನ್‌ಆರ್ 2024, ದಿನಾಂಕ: 08.08.2024.

*****

**ಪ್ರಸ್ತಾವನೆ:**

2024-25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ (1ನೇ ಜೂನ್ ರಿಂದ 30ನೇ ಸೆಪ್ಟೆಂಬರ್ ರವರೆಗೆ) ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯ ಹಾಗೂ ಪ್ರವಾಹದಿಂದಾಗಿ ಮನೆಯ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು ನೈಸರ್ಗಿಕ ವಿಕೋಪಗಳಿಂದ ಉಂಟಾಗುವ ಹಾನಿಗಳಿಗೆ ನೀಡಬಹುದಾದ ಪರಿಹಾರಗಳ ಕುರಿತು SDRF / NDRF Items and Norms of Assistance ಕುರಿತು ದಿನಾಂಕ:11/07/2023 ರಂದು ಹೊರಡಿಸಿರುವ ಮಾರ್ಗಸೂಚಿಗಳಲ್ಲಿ ನಿಗದಿಪಡಿಸಿರುವ ಪರಿಹಾರ ಮೊತ್ತದ ಜೊತೆಗೆ ರಾಜ್ಯ ಸರ್ಕಾರದಿಂದ ಅರ್ಹತೆಯಂತೆ ಮನೆ / ಹೆಚ್ಚುವರಿ ಮೊತ್ತವನ್ನು ನಿಗದಿಪಡಿಸಿ, ಸದರಿ ಪರಿಹಾರ ಮೊತ್ತವನ್ನು ಪಾವತಿಸಲು ಜಿಲ್ಲಾಧಿಕಾರಿಗಳು ಅನುಸರಿಸಬೇಕಾಗಿರುವ ಕ್ರಮಗಳ ಮತ್ತು ಷರತ್ತುಗಳ ಕುರಿತು ಮೇಲೆ ಓದಲಾದ ಕ್ರ.ಸಂ. (1) ಮತ್ತು (2) ರ ಆದೇಶಗಳಲ್ಲಿ ನೀಡಲಾಗಿರುತ್ತದೆ.

ಭಾರತೀಯ ಹವಾಮಾನ ಇಲಾಖೆ (IMD) ಪ್ರಕಾರ ಮತ್ತು ಕರ್ನಾಟಕ ರಾಜ್ಯ ನೈಸರ್ಗಿಕ ಉಸ್ತುವಾರಿ ಕೇಂದ್ರ ರವರ ವರದಿಯಲ್ಲಿ, ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನ ದೀರ್ಘಾವಧಿಯ ಮತ್ತು

.....2

ಅಕ್ಟೋಬರ್ ತಿಂಗಳ ಮಳೆ ಹಾಗೂ ತಾಪಮಾನದ ಮುನ್ಸೂಚನೆಯ ಪ್ರಕಾರ ಸಾಧಾರಣ ಮಳೆಗಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇರುವುದಾಗಿ ವರದಿಸಲಾಗಿದ್ದು, ಅದರಂತೆ ಈಗಾಗಲೇ ರಾಜ್ಯದಲ್ಲಿ 2024 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನಲ್ಲಿ ಕೆಲವು ಜಿಲ್ಲೆಗಳಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಇದರಿಂದಾಗಿ ಮನೆ ಹಾನಿ / ಗೃಹೋಪಯೋಗಿ ವಸ್ತುಗಳು ಹಾನಿಯಾಗಿರುವುದು ವರದಿಯಾಗಿರುತ್ತದೆ.

ಆದ್ದರಿಂದ, 2024-25 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನಲ್ಲಿ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾಗಿರುವ / ಹಾನಿಯಾಗುವ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯಗಳಿಗೆ ಪರಿಹಾರವನ್ನು ಪಾವತಿಸುವ ಮತ್ತು ಮನೆ ಹಾನಿ ಪ್ರಕರಣಗಳ ವಿವರಗಳನ್ನು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಅವಧಿಯನ್ನು ನೀಡಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶ;

**ಸರ್ಕಾರದ ಆದೇಶ ಸಂಖ್ಯೆ: ಕಂಇ 538 ಟಿಎನ್ಆರ್ 2024, ಬೆಂಗಳೂರು, ದಿನಾಂಕ:12.11.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2024-25 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನಲ್ಲಿ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾಗಿರುವ / ಹಾನಿಯಾಗುವ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯಗಳಿಗೆ ಪರಿಹಾರವನ್ನು ಸರ್ಕಾರದ ಆದೇಶ ಸಂಖ್ಯೆ: ಕಂಇ 258 ಟಿಎನ್ಆರ್ 2024, ದಿನಾಂಕ: 01.08.2024 ಮತ್ತು ಅದೇ ಸಮ ಸಂಖ್ಯೆಯ ಸರ್ಕಾರದ ಪರಿಷ್ಕೃತ ಸೇರ್ಪಡೆ ಆದೇಶ ದಿನಾಂಕ: 08.08.2024 ರಲ್ಲಿ ವಿಧಿಸಿರುವ ಷರತ್ತುಗಳ ಪಾಲನೆಗೆ ಒಳಪಟ್ಟು, ಅರ್ಹತೆಯಂತೆ ಸದರಿ ಆದೇಶಗಳಲ್ಲಿ ನಿಗದಿಪಡಿಸಿರುವ ಪರಿಹಾರ ಮೊತ್ತದಂತೆ ಪಾವತಿಸಲು ಆದೇಶಿಸಿದೆ.

2024-25 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನಲ್ಲಿ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ / ಹಾನಿಯಾಗುವ ಮನೆಗಳ ವಿವರಗಳನ್ನು ಜಿಲ್ಲಾಧಿಕಾರಿಗಳು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಅನುವಾಗುವಂತೆ, ಸದರಿ ತಂತ್ರಾಂಶವನ್ನು ಈ ಕೂಡಲೇ ಜಾರಿಗೆ ಬರುವಂತೆ ದಿನಾಂಕ: 30.11.2024 ರವರೆಗೆ ಮಾತ್ರ ಸಕ್ರಿಯಗೊಳಿಸಲು, ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರಿಗೆ ನಿರ್ದೇಶಿಸಿದೆ.

.....3

2024-25 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನಲ್ಲಿ ಅತಿವೃಷ್ಟಿ / ಪ್ರವಾಹದಿಂದ ಇದುವರೆವಿಗೂ ಹಾನಿಯಾಗಿರುವ ಮನೆಗಳ ವಿವರ, ಅರ್ಹ ಫಲಾನುಭವಿಗಳ ವಿವರ, ಪಾವತಿಸಲಾದ ಪರಿಹಾರ ಮೊತ್ತ ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳನ್ನು ಹಾಗೂ 30ನೇ ನವೆಂಬರ್ 2024 ರವರೆಗೆ ಮನೆ ಹಾನಿಯ ವಿವರಗಳನ್ನು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಜಿಲ್ಲಾಧಿಕಾರಿಗಳು ಕೂಡಲೇ ಕ್ರಮ ವಹಿಸುವುದು. ಜಿಲ್ಲಾಧಿಕಾರಿಗಳು 2024-25 ನೇ ಸಾಲಿನ ಈಶಾನ್ಯ (NorthEast) ಮುಂಗಾರು ಹಂಗಾಮಿನ ಋತುವಿನಲ್ಲಿ ಅತಿವೃಷ್ಟಿ / ಪ್ರವಾಹದಿಂದ ಇದುವರೆವಿಗೂ ಹಾನಿಯಾಗಿರುವ ಮನೆಗಳ ವಿವರ, ಅರ್ಹ ಫಲಾನುಭವಿಗಳ ವಿವರ, ಪಾವತಿಸಲಾದ ಪರಿಹಾರ ಮೊತ್ತ ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳನ್ನು ಹಾಗೂ 30ನೇ ನವೆಂಬರ್ 2024 ರವರೆಗೆ ಮನೆ ಹಾನಿಯ ವಿವರಗಳನ್ನು ನಿಗಧಿತ ನಮೂನೆಯಲ್ಲಿ ಅವರ ಅಧಿಕೃತ ಜಾಲತಾಣದಲ್ಲಿ ಸಹ ದಾಖಲಿಸಲು ಕ್ರಮವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1084 ವೆಚ್ಚ-7/2024, ದಿನಾಂಕ:08.11.2024 ರಲ್ಲಿ ನೀಡಿರುವ ಸಹಮತದ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Mukhtar Pasha H-G 12/11/2024

**(ಮುಕ್ತಾರ್ ಪಾಷ್. ಹೆಚ್.ಜಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA)/(G&SSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬಹುಮಹಡಿಒ ಕಟ್ಟಡ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ, ಬೆಂಗಳೂರು.
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

.....4

6. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
9. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ) ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ ಮತ್ತು ನೋಂ & ಮು) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
10. ಕಂದಾಯ ಇಲಾಖೆ (ವಿ.ನಿ) ಲೆಕ್ಕ ಪತ್ರ ಶಾಖೆ.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.